# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002

**ಪತ್ರಿಕಾ ಪ್ರಕಟಣೆ** **ದಿನಾಂಕ: 18.12.2019**

## ಪೂಜ್ಯ ಮಹಾಪೌರರು ರವರ ಅಧ್ಯಕ್ಷತೆಯಲ್ಲಿ ಮಾರುಕಟ್ಟೆ ಅಸೋಸಿಯೇಷನ್ ಪದಾಧಿಕಾರಿಗಳ ಜೊತೆ ಸಭೆ:



ನಗರದ ಕೆ.ಆರ್.ಮಾರುಕಟ್ಟೆ ಹಾಗೂ ಇತರೆ ಮಾರುಕಟ್ಟೆಗಳ ಅಸೋಸಿಯೇಷನ್ ಪದಾಧಿಕಾರಿಗಳ ಜೊತೆ ಇಂದು ಸಭೆ ನಡೆಸಲಾಯಿತು. ಈ ವೇಳೆ ಆಡಳಿತ ಪಕ್ಷದ ನಾಯಕರು ಶ್ರೀ ಮುನೀಂದ್ರ ಕುಮಾರ್, ಬೆಂಗಳೂರು ಕೇಂದ್ರ ಸಂಸದರು ಶ್ರೀ ಪಿ.ಸಿ.ಮೋಹನ್, ಪಾಲಿಕೆ ಆಯುಕ್ತರು ಶ್ರೀ ಬಿ.ಹೆಚ್.ಅನಿಲ್ ಕುಮಾರ್, ವಿಶೇಷ ಆಯುಕ್ತರು(ಕಲ್ಯಾಣ) ಶ್ರೀ ರವೀಂದ್ರ, ಪಶ್ಚಿಮ ವಲಯ ಹಾಗೂ ಮಾರುಕಟ್ಟೆ ಜಂಟಿ ಆಯುಕ್ತರು ಶ್ರೀ ಚಿದಾನಂದ್ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಪಾಲಿಕೆ ವ್ಯಾಪ್ತಿಯಲ್ಲಿರುವ ಮಾರುಕಟ್ಟೆಗಳ ಸಮಸ್ಯೆಗಳನ್ನು ಪಾಲಿಕೆ ಇತ್ಯರ್ಥಮಾಡಲಿದೆ. ಕೆ.ಆರ್.ಮಾರುಕಟ್ಟೆಯಲ್ಲಿರುವ 24 ಅನಧಿಕೃತ ಮಳಿಗೆಗನ್ನು ತೆರವುಗೊಳಿಸಲಿದ್ದು, ಅದಕ್ಕೆ ಯಾರೂ ಅಡ್ಡಿಪಡಿಸದೆ ಸಹಕಾರ ನೀಡುವಂತೆ ಅಸೋಸಿಯೇಷನ್ ಪದಾಧಿಕಾರಿಗಳಿಗೆ ಮಹಾಪೌರರು ಸೂಚನೆ ನೀಡಿದರು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಮಹಾಪೌರರು, ಉದ್ದಿಮೆ ಪರವಾನಗಿ ಇಲ್ಲದ ಮಳಿಗೆಗಳಿಗೆ ಕೂಡಲೆ ಪರವಾನಗಿ ಮಾಡಿಸಿಕೊಳ್ಳಬೇಕು. ಪಾಲಿಕೆ ನಿಗದಿಪಡಿಸಿರುವ ಬಾಡಿಗೆಯನ್ನು ಸರಿಯಾಗಿ ಪಾವತಿಸಬೇಕು. ಜೊತೆಗೆ ಪಾಲಿಕೆಗೆ ಬಾಡಿಗೆ ಪಾವತಿಸದೆ ಉಳಿಸಿಕೊಂಡಿರುವ ಬಾಕಿ ಮೊತ್ತವನ್ನು ಪಾಲಿಕೆಗೆ ಪಾವತಿಸುಬೆಕು ಎಂದು ತಿಳಿಸಿದರು.

ಮಾರುಕಟ್ಟೆಗಳ ವಿಚಾರವಾಗಿ ನ್ಯಾಯಾಲದಲ್ಲಿರುವ ಪ್ರಕರಣಗಳನ್ನು ಇತ್ಯರ್ಥ ಮಾಡುವ ಬಗ್ಗೆ ಪಾಲಿಕೆ ಕಾನೂನು ಕೋಶ ವಿಭಾಗದವರ ಜೊತೆ ಚರ್ಚಿಸಲಾಗವುದು. ಜೊತೆಗೆ 5 ವರ್ಷಗಳ ಕಾಲ ಮಾತ್ರ ವ್ಯಾಪಾರ ಮಾಡುಲು ಅನುಮತಿ ನೀಡುವ ನಿಯಮವನ್ನು ತಿದ್ದುಪಡಿ ಮಾಡುವ ಬಗ್ಗೆ ಆಯುಕ್ತರ ಜೊತೆ ಸಭೆ ನಡೆಸಿ ಸೂಕ್ತ ನಿರ್ಧಾರ ಕೈಗೊಳ್ಳಲಾಗವುದು ಎಂದು ಹೇಳಿದರು.

ಮಾರುಕಟ್ಟೆಗಳಲ್ಲಿ ಪ್ಲಾಸ್ಟಿಕ್ ಬಳಕೆ ಮಾಡುವುದನ್ನು ಕೂಡಲೆ ನಿಲ್ಲಿಸಬೇಕು. ಎಲ್ಲಾ ಮಾರುಕಟ್ಟೆಗಳ ಅಸೋಸಿಯೇಷನ್ ಪದಾಧಿಕಾರಿಗಳು ಈ ಬಗ್ಗೆ ಹೆಚ್ಚು ಗಮನವರಿಸಬೇಕು ಎಂದು ಸೂಚನೆ ನೀಡಿದರು.

**ಪಾಲಿಕೆ ಆಯುಕ್ತರು ಮಾತನಾಡಿ,** ಪಾಲಿಕೆ ವ್ಯಾಪ್ತಿಯಲ್ಲಿರುವ ಮಾರುಕಟ್ಟೆಗಳಲ್ಲಿ ವ್ಯಾಪಾರ ವಹಿವಾಟು ಸಾರಿಯಾಗಿ ಆಗಬೇಕಾದರೆ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿರುವಂತೆ ನೋಡಿಕೊಳ್ಳಬೇಕು. ಈ ಸಂಬಂಧ ಅಸೋಸಿಯೇಷನ್‌ನವರೇ ನಿಮ್ಮ ನಿಮ್ಮ ಮಾರುಕಟ್ಟೆಗಲ್ಲಿ ಕಸ ಬೀಳದ ಹಾಗೆ ನೋಡಿಕೊಳ್ಳಬೇಕು. ಅದಕ್ಕೆ ಪಾಲಿಕೆಯಿಂದ ಅಗತ್ಯವಿರುವ ಸಹಕರ ನೀಡಲಾಗುವುದು ಎಂದರು.

ಕೆ.ಆರ್.ಮಾರುಕಟ್ಟೆಯಲ್ಲಿ 24 ಅನಧಿಕೃತ ಮಳಿಗೆಗಳನ್ನು ತೆರವುಗೊಳಿಸಲು ಅಸೋಸಿಯೇಷನ್ ಸಹಕಾರ ನೀಡಬೇಕು. ಅದನ್ನು ತೆರವುಗೊಳಿಸಿದ ಬಳಿಕ ಯಾವುದೇ ಅನಧಿಕೃತ ಮಳಿಗೆಗಳ ಪ್ರಾರಂಭವಾಗದಂತೆ ಕ್ರಮವಹಿಸಬೇಕು. ಪಾಲಿಕೆ ನಿಗದಿಪಡಿಸಿರುವ ಬಾಡಿಗೆಯನ್ನು ಪಾಲಿಕೆ ಸರಿಯಾಗಿ ಪಾವತಿಸಬೇಕು. ಜೊತೆಗೆ ಮಳಿಗೆಗಳ ಬಾಡಿಕೆ ಪಾಲಿಕೆ ಪಾವತಿಸದೆ ಉಳಿಸಿಕೊಂಡಿರುವ ಬಾಕಿಮೊತ್ತವನ್ನು ಪಾಲಿಕೆಗೆ ಪಾವತಿ ಮಾಡಬೇಕು. ಆ ಬಳಿಕ ವ್ಯಾಪಾರಿಗಳಿಗೆ ಯಾವುದೇ ಸಮಸ್ಯೆ ಎದುರಾಗದಂತೆ ಪಾಲಿಕೆಯು ನೋಡಿಕೊಳ್ಳಲಿದೆ. ಉದ್ದಿಮೆ ಪರವಾನಗಿ ಪಡೆಯದವರಿಗಾಗಿ ಒಂದು ದಿನವನ್ನು ನಿಗದಿಪಡಿಸಿ ಆರೋಗ್ಯಾಧಿಕಾರಿಗಳ ತಂಡವನ್ನು ಕಳುಹಿಸಿಕೊಡಲಾಗವುದು. ಆ ದಿನ ಎಲ್ಲರೂ ಉದ್ದಿಮೆ ಪರವಾನಗಿ ಮಾಡಿಸಿಕೊಳ್ಳುವಂತೆ ಸೂಚನೆ ನೀಡಿದರು.

ಕೆ.ಆರ್.ಮಾರುಕಟ್ಟೆ ರಸ್ತೆ, ಮೇಲ್ಸೇತುವೆ ಕೆಳಭಾಗದಲ್ಲಿ ವಾಹನಗಳನ್ನು ನಿಲ್ಲಿಸದಿಸದಿರಲು ಸೂಕ್ತ ಕ್ರಮವಹಿಸಿದ್ದು, ಸಂಚಾರಿ ಪೊಲೀಸರ ಸಹಕಾರದಲ್ಲಿ ಎಲ್ಲಾ ವಾಹನಗಳನ್ನು ತೆರವುಗೊಳಿಸಲಾಗಿದೆ. ಸ್ಮಾರ್ಟ್ ಸಿಟಿ ಯೋಜನೆಯಡಿ ಕೆ.ಆರ್.ಮಾರುಕಟ್ಟೆಯನ್ನು ನವೀಕರಣಗೊಳಿಸುವ ಯೋಜನೆ ಕೈಗೆತ್ತಿಕೊಳ್ಳಲಾಗುತ್ತಿದೆ. ಈ ಮಾರುಕಟ್ಟೆಯನ್ನು ಆಕರ್ಷಣಾ ತಾಣವನ್ನಾಗಿ ನಿರ್ಮಿಸಲಾಗುವುದು. ವ್ಯಾಪಾರಿಗಳಿಗೆ ಅಗತ್ಯವಿರುವ ಸೌಲಭ್ಯಗಳನ್ನು ಪಾಲಿಕೆಯಿಂದ ಒದಗಿಸಲಾಗವುದು ಎಂದರು.

**ಬೆಂಗಳೂರು ಕೇಂದ್ರ ಸಂಸದರು ಮಾತನಾಡಿ,** ಪಾಲಿಕೆ ವ್ಯಾಪ್ತಿಯಲ್ಲಿರುವ ಕೆ.ಆರ್.ಮಾರುಕಟ್ಟೆ, ರಸಲ್ ಮಾರುಕಟ್ಟೆ ಸೇರಿದಂತೆ ಇನ್ನಿತರ ಮಾರುಕಟ್ಟೆಗಳಲ್ಲಿ 5 ವರ್ಷಗಳ ಕಾಲ ಮಾತ್ರ ವ್ಯಾಪಾರ ಮಾಡುಲು ಅನುಮತಿ ನೀಡುವ ನಿಯಮವನ್ನು ತಿದ್ದುಪಡಿ ಮಾಡುವಂತೆ ಪಾಲಿಕೆ ಆಯುಕ್ತರಿಗೆ ಸೂಚನೆ ನೀಡಿದರು. ನಿಮ್ಮೆಲ್ಲ ಸಮಸ್ಯೆಗಳನ್ನು ಬಗೆಹರಿಸಲಾಗುವುದು. ಇನ್ನುಮುಂದೆ ನೀವು ಪಾಲಿಕೆ ನಿಗದಿಪಡಿಸಿರುವ ಬಾಡಿಗೆಯನ್ನು ಸಪರ್ಮಕವಾಗಿ ಪಾವತಿಸಬೇಕು. ಸದಾ ನಾವು ನಿಮ್ಮ ಜೊತೆ ಇರುತ್ತೇವೆ ಎಂದು ತಿಳಿಸಿದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**